ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 656 (728)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ಕೃಷಿ ಇಲಾಖೆಯಿಂದ ಮಂಜೂರಾದ ಯೋಜನೆಗಳ ಬಗ್ಗೆ

(ಅ) ಕಳೆದ 3 ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರಿಗೆ ಮಂಜೂರಾದ ಯೋಜನೆಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಈ ಯೋಜನೆಗಳಿಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳಿಗೆ ನಿಗದಿಪಡಿಸಿರುವ ಗುರಿ ಮತ್ತು ಸಾಧನೆ ಎಷ್ಟು;

(ಈ) ಈ ಯೋಜನೆಗಳಿಗೆ ನಿಗದಿಪಡಿಸಿದ ಅನುದಾನವೆಷ್ಟು; (ತಾಲ್ಲೂಕುವಾರು ಫಲಾನುಭವಿಗಳ ಸಂಖ್ಯೆವಾರು ಮಾಹಿತಿ ನೀಡುವುದು)

(ಉ) ಬೀದರ್ ಜಿಲ್ಲೆಯಲ್ಲಿ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರಿಗೆ ನೀಡುತ್ತಿರುವ ತಾಡಪತ್ರಿಗಳು ಸರಿಯಾಗಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)